ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ: 080-22278803
ಅಂತರ್ಜಾಲ: www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

Corporate Identity Number (CIN): U40109KA1999SGC025521

**(ಕಂಪನಿಯ ಅಧಿಕೃತ ಕಚೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009)**

ವಿಷಯ: ಕೊಡಗು ಜಿಲ್ಲೆಯಲ್ಲಿ ಅತಿಯಾದ ಮಳೆ ಹಾಗೂ ಪ್ರಕೃತಿ ವಿಕೋಪದಿಂದ ನಿರಾಶ್ರಿತರಾಗಿರುವ ಜನರಿಗೆ ಪುನರ್ವಸತಿ ಕಲ್ಪಿಸಲು ರಾಜ್ಯದ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ-ಪ್ರಕೃತಿ ವಿಕೋಪ-2018 ಕ್ಕೆ ದೇಣಿಗೆ ನೀಡುವ ಬಗ್ಗೆ.

ಉಲ್ಲೇಖ: ಕವಿಮಂ ನೌಕರರ/ಅಧಿಕಾರಿಗಳ ಸಂಘದ ಒಕ್ಕೂಟ ರವರ ಪತ್ರ ಸಂಖ್ಯೆ: ಎಫ್‌ಕೆಇಬಿಇಉಎ/2018/1, ದಿನಾಂಕ: 21.08.2018.

*****

**ಪೀಠಿಕೆ:**

ದಿನಾಂಕ: 21.08.2018 ರ ಸಭೆಯಲ್ಲಿ ಕರ್ನಾಟಕ ರಾಜ್ಯದ ಕೊಡಗು ಜಿಲ್ಲೆಯಲ್ಲಿ ಅತಿಯಾದ ಮಳೆ ಮತ್ತು ಪ್ರಕೃತಿ ವಿಕೋಪದಿಂದ ಸಂತ್ರಸ್ಥರಾಗಿರುವ ಜನರ ಬಗ್ಗೆ ಸಂತಾಪವನ್ನು ವ್ಯಕ್ತಪಡಿಸಿದ ಕವಿಪ್ರನಿನಿ ನೌಕರರ/ಅಧಿಕಾರಿಗಳ ಸಂಘದ ಒಕ್ಕೂಟ ಮಾನವೀಯತೆ ದೃಷ್ಟಿಯಿಂದ ಕವಿಪ್ರನಿನಿ/ಎಸ್ಕಾಂ/ಪಿಸಿಕೆಎಲ್ ನೌಕರರ/ಅಧಿಕಾರಿಗಳ ಆಗಸ್ಟ್-2018 ರ ತಿಂಗಳ ಸಂಬಳದಲ್ಲಿ ಎರಡು ದಿನಗಳ ಸಂಬಳವನ್ನು ಕಡಿತಗೊಳಿಸಿ ಮಾನ್ಯ ಮುಖ್ಯ ಮಂತ್ರಿಗಳ ಪರಿಹಾರ ನಿಧಿ-ಪ್ರಕೃತಿ ವಿಕೋಪ-2018 ಕ್ಕೆ ದೇಣಿಗೆಯಾಗಿ ನೀಡುವಂತೆ ನಿರ್ಣಯಿಸಿ ಈ ಕುರಿತು ಸೂಕ್ತ ಆದೇಶ ಹೊರಡಿಸಲು ಕೋರಿ ಉಲ್ಲೇಖದಲ್ಲಿನ ಪತ್ರದಲ್ಲಿ ನಿಗಮಕ್ಕೆ ಮನವಿ ಸಲ್ಲಿಸಿರುತ್ತಾರೆ. ಅದ್ದರಿಂದ ಈ ಕೆಳಗಿನಂತೆ ಆದೇಶಿಸಿದೆ:

**ಆದೇಶ ಸಂಖ್ಯೆ: ಕವಿಪ್ರನಿನಿ/ಔಬಾ/ಹಿಸ7/35891/2012-13, ಬೆಂಗಳೂರು, ದಿನಾಂಕ: 2 3 AUG 2018**

ಕೊಡಗು ಜಿಲ್ಲೆಯಲ್ಲಿ ಅತಿಯಾದ ಮಳೆ ಮತ್ತು ಪ್ರಕೃತಿ ವಿಕೋಪಕ್ಕೆ ತುತ್ತಾಗಿರುವ ಸಂತ್ರಸ್ಥರ ಪುನರ್ವಸತಿಗಾಗಿ ಕವಿಪ್ರನಿನಿ, ಪಿ.ಸಿ.ಕೆ.ಎಲ್ ಮತ್ತು ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು/ಅಧಿಕಾರಿಗಳ ಆಗಸ್ಟ್-2018 ರ ತಿಂಗಳಿನ ಸಂಬಳದಲ್ಲಿ ಎರಡು ದಿನಗಳ ಸಂಬಳವನ್ನು ಕಡಿತಗೊಳಿಸಿ ಒಟ್ಟು ಮೊತ್ತವನ್ನು ಕವಿಪ್ರನಿನಿ ವತಿಯಿಂದಲೇ ನೇರವಾಗಿ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ-ಪ್ರಕೃತಿ ವಿಕೋಪ-2018 ಕ್ಕೆ ದೇಣಿಗೆಯಾಗಿ ನೀಡಲು ಈ ಕೆಳಕಂಡಂತೆ ಆದೇಶಿಸಲಾಗಿದೆ.

1. ಕವಿಪ್ರನಿನಿ/ಪಿ.ಸಿ.ಕೆ.ಎಲ್ ನಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರು/ಅಧಿಕಾರಿಗಳಿಗೆ ಸಂಬಂಧಪಟ್ಟಂತೆ ಎಲ್ಲಾ ವೇತನ ಬಟವಾಡೆ ಅಧಿಕಾರಿಗಳು ಆಗಸ್ಟ್-2018 ರ ತಿಂಗಳಿನ ಸಂಬಳದಲ್ಲಿ ಎರಡು ದಿನಗಳ ಸಂಬಳವನ್ನು ಕಡಿತಗೊಳಿಸಿ ದಿನಾಂಕ: 31.08.2018 ರ ಒಳಗೆ ಕವಿಪ್ರನಿನಿ ಖಾತೆ ಸಂಖ್ಯೆ: 111800300005318, ವಿಜಯ ಬ್ಯಾಂಕ್, ಕೆ.ಜಿ.ರಸ್ತೆ, ಬೆಂಗಳೂರು, ಐ.ಎಫ್.ಎಸ್.ಸಿ.ಕೋಡ್: VIJB0001118 ಕ್ಕೆ ಆರ್.ಟಿ.ಜಿ.ಎಸ್ ಮೂಲಕ ಜಮಾಗೊಳಿಸಲು ಕ್ರಮ ಕೈಗೊಳ್ಳುವುದು.

2. ವಿವಿಧ ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳು/ನೌಕರರಿಗೆ ಸಂಬಂಧಪಟ್ಟಂತೆ ಎಲ್ಲಾ ವೇತನ ಬಟವಾಡೆ ಅಧಿಕಾರಿಗಳು ಆಗಸ್ಟ್-2018 ರ ತಿಂಗಳಿನ ಸಂಬಳದಲ್ಲಿ ಎರಡು ದಿನಗಳ ಸಂಬಳವನ್ನು ಕಡಿತಗೊಳಿಸಿ, ಒಟ್ಟು ಮೊತ್ತವನ್ನು ದಿನಾಂಕ: 30.08.2018 ರ ಒಳಗೆ

ತಮ್ಮ ಕಂಪನಿಗಳ ಆರ್ಥಿಕ ಸಲಹೆಗಾರರು (ಲೆಕ್ಕಗಳು) ಇವರಿಗೆ ತಿಳಿಸುವುದು. ವಿದ್ಯುತ್ ಸರಬರಾಜು ಕಂಪನಿಗಳ ಆರ್ಥಿಕ ಸಲಹೆಗಾರರು (ಲೆಕ್ಕಗಳು) ಇವರು ಎಲ್ಲಾ ವೇತನ ಬಟವಾಡೆ ಅಧಿಕಾರಿಗಳು ತಿಳಿಸಿರುವ ಮೊತ್ತಗಳನ್ನು ಕ್ರೋಢೀಕರಿಸಿ ಒಟ್ಟು ಮೊತ್ತವನ್ನು ದಿನಾಂಕ: 31.08.2018 ರ ಒಳಗೆ ಕವಿಪ್ರನಿನಿ ಖಾತೆ ಸಂಖ್ಯೆ: 111800300005318, ವಿಜಯ ಬ್ಯಾಂಕ್, ಕೆ.ಜಿ.ರಸ್ತೆ, ಬೆಂಗಳೂರು ಐ.ಎಫ್.ಎಸ್.ಸಿ.ಕೋಡ್: VIJB0001118 ಕ್ಕೆ ಆರ್.ಟಿ.ಜಿ.ಎಸ್ ಮೂಲಕ ಜಮಾಗೊಳಿಸಲು ಕ್ರಮ ಕೈಗೊಳ್ಳುವುದು.

3. ಕವಿಪ್ರನಿನಿ, ಎಲ್ಲಾ ವಿದ್ಯುತ್ ಸರಬರಾಜು ಕಂಪನಿಗಳು ಹಾಗೂ ಪಿ.ಸಿ.ಕೆ.ಎಲ್ ನಿಂದ ಮೇಲಿನಂತೆ ಕವಿಪ್ರನಿನಿ ಖಾತೆಗೆ ಜಮಾಗೊಂಡ ಮೊತ್ತಗಳನ್ನು ಕ್ರೋಢೀಕರಿಸಿ ಕೂಡಲೇ ಮಾನ್ಯ ಮುಖ್ಯಮಂತ್ರಿಗಳ ಪರಿಹಾರ ನಿಧಿ – ಪ್ರಕೃತಿ ವಿಕೋಪ–2018 ಕ್ಕೆ ದೇಣಿಗೆಯಾಗಿ ನೀಡಲು ಆರ್ಥಿಕ ಸಲಹೆಗಾರರು (ಲೆಕ್ಕಗಳು ಮತ್ತು ಸಂಪನ್ಮೂಲ), ಕವಿಪ್ರನಿನಿ ರವರು ಸೂಕ್ತ ಕ್ರಮ ಕೈಗೊಳ್ಳುವುದು.

**(ಮಾನ್ಯ ವ್ಯವಸ್ಥಾಪಕ ನಿರ್ದೇಶಕರು, ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟಿದೆ)**

ನಿರ್ದೇಶಕರು
(ಆಡಳಿತ ಮತ್ತು ಮಾನವ ಸಂಪನ್ಮೂಲ)

<u>ಪ್ರತಿಯನ್ನು ಮಾಹಿತಿಗಾಗಿ:</u>

1. ಎಲ್ಲಾ ವ್ಯವಸ್ಥಾಪಕ ನಿರ್ದೇಶಕರು, ಎಸ್ಕಾಂ/ಪಿಸಿಕೆಎಲ್.
2. ಎಲ್ಲಾ ನಿರ್ದೇಶಕರು(ತಾಂತ್ರಿಕ), ಎಸ್ಕಾಂ/ನಿರ್ದೇಶಕರು(ಹಣಕಾಸು), ಬೆವಿಕಂ.
3. ಎಲ್ಲಾ ಪ್ರಧಾನ ವ್ಯವಸ್ಥಾಪಕರು, ಎಸ್ಕಾಂ.
4. ಎಲ್ಲಾ ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ಎಸ್ಕಾಂ.
5. ಎಲ್ಲಾ ಮುಖ್ಯ ಇಂಜನಿಯರ್, ಕವಿಪ್ರನಿನಿ/ಎಸ್ಕಾಂ.
6. ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಪ್ರಸರಣ)/(ಹಣಕಾಸು)/(ಆಡಳಿತ ಮತ್ತು ಮಾ.ಸಂ)/ ನಿರ್ದೇಶಕರು ಮತ್ತು ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ ಇವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.

<u>ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ www.kptcl.com-->eprasarna ವೆಬ್ ಸೈಟ್‌ನಲ್ಲಿ ಪ್ರಕಟಿಸಲಾಗಿದೆ.</u>

7. ಎಲ್ಲಾ ಅಧೀಕ್ಷಕ ಇಂಜನಿಯರ್/ನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
8. ಎಲ್ಲಾ ಕಾರ್ಯನಿರ್ವಾಹಕ ಇಂಜನಿಯರ್(ವಿ)/ಉಪ ಲೆಕ್ಕನಿಯಂತ್ರಣಾಧಿಕಾರಿ, ಕವಿಪ್ರನಿನಿ/ಎಸ್ಕಾಂ.
9. ನಿಗಮ ಕಾರ್ಯಾಲಯದ ಎಲ್ಲಾ ಅಧಿಕಾರಿಗಳು/ಎಲ್ಲಾ ಲೆಕ್ಕಾಧಿಕಾರಿಗಳು(ಆಂ.ಪ), ಕವಿಪ್ರನಿನಿ/ಎಸ್ಕಾಂ.
10. ಕ್ರೋಢೀಕರಣ ಘಟಕ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

<u>ಪ್ರತಿಗಳನ್ನು ಮಾಹಿತಿಗಾಗಿ.</u>

1. ಶ್ರೀ.ಟಿ.ಆರ್.ರಾಮಕೃಷ್ಣಯ್ಯ, ಅಧ್ಯಕ್ಷರು, ಕವಿಪ್ರನಿ ನೌಕರರ ಸಂಘ(659) ಹಾಗೂ ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
2. ಶ್ರೀ.ಎ.ಎನ್.ಜಯರಾಜ್, ಅಧ್ಯಕ್ಷರು, ಕವಿಮಂ ಇಂಜನಿಯರ್‌ಗಳ ಸಂಘ ಹಾಗೂ ನಿರ್ದೇಶಕರು, ಕವಿಪ್ರನಿನಿ/ ಎಸ್ಕಾಂಗಳು.
3. ಪ್ರಧಾನ ಕಾರ್ಯದರ್ಶಿ, ಕವಿಪ್ರನಿ ನೌಕರರ ಸಂಘ, ಬೆಂಗಳೂರು.
4. ಪ್ರಧಾನ ಕಾರ್ಯದರ್ಶಿ, ಕವಿಮಂ ಇಂಜನಿಯರುಗಳ ಸಂಘ, ಬೆಂಗಳೂರು.
5. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಲೆಕ್ಕಾಧಿಕಾರಿಗಳ ಸಂಘ, ಬೆಂಗಳೂರು.
6. ಪ್ರಧಾನ ಕಾರ್ಯದರ್ಶಿ, ಕವಿಮಂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಸಂಸ್ಥೆ, ಬೆಂಗಳೂರು.
7. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ ಡಿಪ್ಲೋಮ ಇಂಜನಿಯರುಗಳ ಸಂಘ, ಬೆಂಗಳೂರು.
8. ಪ್ರಧಾನ ಕಾರ್ಯದರ್ಶಿ, ಕವಿಪ್ರನಿನಿ/ಎಸ್ಕಾಂಗಳ ಪಂಗಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಧಿಕಾರಿಗಳ ಸಂಘ, ಬೆಂಗಳೂರು.